RNU AIR DHARWAD

**MAY 13, 2026**
**ALL INDIA RADIO- DHARWAD**
**PRADESH SAMACHARA (KANNADA) 7:05 AM**

**ಮುಖ್ಯಾಂಶಗಳು**

- **ತುಮಕೂರಿನಲ್ಲಿ ನಡೆಯಲಿರುವ** ರಾಜ್ಯ ಸರ್ಕಾರದ ಬೃಹತ್ ಸಮಾವೇಶ ಸಾಧನೆಯ ಸಂಭ್ರಮವಲ್ಲ, ಸಾರ್ಥಕ ಸೇವೆಯ ಸಮರ್ಪಣೆ–ಕಂದಾಯ ಸಚಿವರ ಸ್ಪಷ್ಟನೆ.

- **ಒಳ ಮೀಸಲಾತಿ ಜಾರಿಗೆ** ರಾಜ್ಯ ಕಾಂಗ್ರೆಸ್‌ಗೆ ಆಸಕ್ತಿ ಇಲ್ಲ–ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಆರೋಪ.

- **ಬೇಸಿಗೆ ಹಿನ್ನೆಲೆ, ರಾಜ್ಯದಲ್ಲಿ** ಹೆಚ್ಚುತ್ತಿರುವ ಬಿಸಿಲಿನ ಧಗೆ: ಕುಡಿಯುವ ನೀರಿನ ಸಮಸ್ಯೆ ಪರಿಹಾರಕ್ಕೆ ಅಗತ್ಯ ಮುನ್ನೆಚ್ಚರಿಕಾ ಕ್ರಮ.

- **ಜ್ಞಾನ ಭಾರತಂ ಮಿಷನ್** ಯೋಜನೆಯಡಿ ಹಸ್ತಪ್ರತಿಗಳ ಸಂರಕ್ಷಣೆ, ಡಿಜಿಟಲೀಕರಣ: ಯಾದಗಿರಿ ಜಿಲ್ಲಾ ಮಟ್ಟದ ಸಮೀಕ್ಷೆಗೆ ಚಾಲನೆ.

**ಈಗ ವಾರ್ತೆಗಳ ವಿವರ**

***********

**ಇದೇ 20 ರಂದು ತುಮಕೂರಿನಲ್ಲಿ** ನಡೆಯಲಿರುವ ರಾಜ್ಯ ಸರ್ಕಾರದ ಬೃಹತ್ ಸಮಾವೇಶ ಕೇವಲ ಸಾಧನೆಯ ಸಂಭ್ರಮವಲ್ಲ, ಕಳೆದ 3 ವರ್ಷಗಳಲ್ಲಿ ರಾಜ್ಯ ಸರ್ಕಾರ ಮಾಡಿರುವ ಆದ್ಯತಾ ಕಾರ್ಯಕ್ರಮಗಳ ಸಾರ್ಥಕ ಸೇವೆಯ ಸಮರ್ಪಣೆ ಎಂದು ಕಂದಾಯ ಸಚಿವ ಕೃಷ್ಣಬೈರೇಗೌಡ ಸ್ಪಷ್ಟಪಡಿಸಿದ್ದಾರೆ. ತುಮಕೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯ ಸರ್ಕಾರ ಅಧಿಕಾರಕ್ಕೆ ಬಂದು ಕಳೆದ 3 ವರ್ಷಗಳ ಅವಧಿಯಲ್ಲಿ ಕಂದಾಯ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳಲ್ಲಿ ಜನರಿಗಾಗಿ ಸಾಕಷ್ಟು ಆದ್ಯತಾ ಯೋಜನೆಗಳನ್ನು ಜಾರಿಗೊಳಿಸಲಾಗಿದೆ. ಕಾರ್ಯಕ್ರಮಗಳ ಅನುಷ್ಠಾನ ಕುರಿತು ಜನರಿಗೆ ನೀಡಿದ್ದ

ಭರವಸೆ ಉಳಿಸಿಕೊಂಡಿರುವ ಬಗ್ಗೆ ಉತ್ತರದಾಯಿತ್ವವಾಗಿ ಸಾರ್ಥಕ ಸೇವೆಯ ಸಮರ್ಪಣಾ ಸಮಾವೇಶ ಆಯೋಜಿಸಲಾಗಿದೆ ಎಂದು ಸಚಿವರು ಹೇಳಿದರು.

*******

**ಭಾರತದ ಮಹಿಳೆಯರಲ್ಲಿ ಹೆಚ್ಚಾಗಿ ವರದಿಯಾಗುತ್ತಿರುವ** ಸರ್ವೈಕಲ್ ಕ್ಯಾನ್ಸರ್ ತಡೆಯುವ ನಿಟ್ಟಿನಲ್ಲಿ ಎಚ್‌ಪಿವಿ ಲಸಿಕಾ ಅಭಿಯಾನವನ್ನು ರಾಜ್ಯಾದ್ಯಂತ ವ್ಯಾಪಕವಾಗಿ ನಡೆಸಲಾಗುತ್ತಿದೆ ಎಂದು ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ ಖರ್ಗೆ ತಿಳಿಸಿದ್ದಾರೆ. ಈ ಕುರಿತು ಸಾಮಾಜಿಕ ಮಾಧ್ಯಮ ಎಕ್ಸ್‌ನಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, ಹೆಣ್ಣುಮಕ್ಕಳು ಪ್ರೌಢಾವಸ್ಥೆಗೆ ಬಂದಾಗಲೇ ಲಸಿಕೆ ನೀಡುವುದು ಹೆಚ್ಚು ಪರಿಣಾಮಕಾರಿ. ಅಭಿಯಾನಕ್ಕೆ ಕಲಬುರಗಿಯಲ್ಲಿ ಉತ್ತಮ ಸ್ಪಂದನೆ ದೊರಕಿದ್ದು, ಇದುವರೆಗೆ ಜಿಲ್ಲೆಯಾದ್ಯಂತ ಮಾರ್ಚ್‌ನಿಂದ ಈವರೆಗೆ 20,511 ಹೆಣ್ಣುಮಕ್ಕಳಿಗೆ ಲಸಿಕೆ ಹಾಕಲಾಗಿದ್ದು, ಶೇಕಡಾ 68.5 ರ ಸಾಧನೆಯೊಂದಿಗೆ ರಾಜ್ಯದಲ್ಲಿಯೇ ಮೊದಲ ಸ್ಥಾನದಲ್ಲಿದೆ ಎಂದು ಸಚಿವರು ತಿಳಿಸಿದ್ದಾರೆ.

*******

**ಮಹಿಳೆಯರನ್ನು ಕಾಡುತ್ತಿರುವ** ಗರ್ಭಕಂಠದ ಕ್ಯಾನ್ಸರ್ ತಡೆಗಟ್ಟುವಲ್ಲಿ ಹೆಚ್‌ಪಿವಿ ಲಸಿಕೆ ಅತ್ಯಂತ ಪರಿಣಾಮಕಾರಿಯಾಗಿದ್ದು, ಸಮಾಜದಲ್ಲಿ ಈ ಕುರಿತು ಜಾಗೃತಿ ಮೂಡಿಸಬೇಕು ಎಂದು ಚಿಕ್ಕಮಗಳೂರು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಹೆಚ್.ಎಸ್.ಕೀರ್ತನಾ ತಿಳಿಸಿದ್ದಾರೆ. ಚಿಕ್ಕಮಗಳೂರಿನಲ್ಲಿ ಆಯೋಜಿಸಿದ್ದ ಹೆಚ್‌ಪಿವಿ ಲಸಿಕಾ ಅಭಿಯಾನಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ಪ್ರಸ್ತುತ ಶೇಕಡಾ 51 ರಷ್ಟು ಲಸಿಕಾ ನೀಡಿಕೆಯಲ್ಲಿ ಪ್ರಗತಿಯಾಗಿದ್ದು, ರಾಜ್ಯ ಮಟ್ಟದಲ್ಲಿ 6ನೇ ಸ್ಥಾನದಲ್ಲಿದೆ. ಉಳಿದ ಶೇಕಡಾ 49 ರಷ್ಟು ಗುರಿ ತಲುಪಲು ಆಶಾ ಕಾರ್ಯಕರ್ತೆಯರು ಮತ್ತು ಆರೋಗ್ಯ ಇಲಾಖೆ ಶ್ರಮಿಸಬೇಕು ಎಂದು ಸಿಇಓ ಸೂಚನೆ ನೀಡಿದರು.

*******

**ಒಳ ಮೀಸಲಾತಿ ಜಾರಿ** ಮಾಡಲು ರಾಜ್ಯ ಕಾಂಗ್ರೆಸ್‌ಗೆ ಅಸಕ್ತಿ ಇಲ್ಲ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಆರೋಪಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯ ಸರ್ಕಾರ ಎಸ್ಸಿ ಎಸ್ಟಿ ಮತ್ತು ಒಬಿಸಿ ಜನಾಂಗಕ್ಕೆ ಬಹಳ ದೊಡ್ಡ ಅನ್ಯಾಯ ಮಾಡುತ್ತಿದೆ. ಎಸ್ಸಿ ಎಸ್ಟಿ ಒಳ ಮೀಸಲಾತಿ ಗೊಂದಲದ ಬಗ್ಗೆ ಸಂವಿಧಾನ ಪೀಠ ರಾಜ್ಯ ಸರ್ಕಾರಗಳಿಗೆ ಅಧಿಕಾರ ಕೊಟ್ಟಿದೆ. ಅದನ್ನು ತೆಲಂಗಾಣ, ಹರಿಯಾಣ ಸೇರಿದಂತೆ ಅನೇಕ ರಾಜ್ಯಗಳು ಜಾರಿ ಮಾಡಿವೆ ಎಂದರು. ಬಿಜೆಪಿ ಸರ್ಕಾರದ ಅವಧಿಯಲ್ಲಿ ಎಸ್ಸಿ ಎಸ್ಟಿ ಸಮುದಾಯಕ್ಕೆ ಹೆಚ್ಚಳ ಮಾಡಿದ್ದ ಮೀಸಲಾತಿಯನ್ನು ರಾಜ್ಯ ಕಾಂಗ್ರೆಸ್

ಸರ್ಕಾರ ರದ್ದು ಮಾಡಿರುವುದನ್ನು ಖಂಡಿಸಿ ಬಿಜೆಪಿ ವತಿಯಿಂದ ರಾಜ್ಯದ ಜನತೆಗೆ ಜಾಗೃತಿ ಮೂಡಿಸಲು ತೀರ್ಮಾನಿಸಲಾಗಿದೆ ಎಂದು ಬಸವರಾಜ ಬೊಮ್ಮಾಯಿ ಹೇಳಿದರು.

*******

**ಧಾರವಾಡ ಜಿಲ್ಲೆ ಕಲಘಟಗಿ** ಪಟ್ಟಣ ಪಂಚಾಯತ್ ವ್ಯಾಪ್ತಿಯ 17 ವಾರ್ಡ್‌ಗಳಿಗೆ ದಿನದ 24 ಗಂಟೆ ಕುಡಿಯುವ ನೀರು ಸರಬರಾಜು ಮಾಡುವ ನಿರಂತರ ಕುಡಿಯುವ ನೀರು ಯೋಜನೆ ಬರುವ ಜೂನ್ 15 ರಿಂದ ಆರಂಭವಾಗಲಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ್ ತಿಳಿಸಿದ್ದಾರೆ. ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆಯಲ್ಲಿ ಈ ವಿಷಯ ತಿಳಿಸಿದ ಅವರು, 2024 ರ ಮೇನಲ್ಲಿ ಆರಂಭಗೊಂಡಿದ್ದ ಯೋಜನೆ 2026 ಏಪ್ರಿಲ್ ತಿಂಗಳಲ್ಲಿ ಮುಕ್ತಾಯಗೊಳ್ಳಬೇಕಿತ್ತು. ತಾಂತ್ರಿಕ ಕಾರಣಗಳಿಂದ ಅದು ಮುಂದೂಡಲ್ಪಟ್ಟಿತು. 35.38 ಕೋಟಿ ಮೊತ್ತದ ಈ ನಿರಂತರ ಕುಡಿಯುವ ನೀರು ಸರಬರಾಜು ವ್ಯವಸ್ಥೆ ಜೂನ್ 15ಕ್ಕೆ ಆರಂಭಗೊಳ್ಳಲಿದೆ ಎಂದರು. ಉಳಿದಂತೆ ಅಣ್ಣಿಗೇರಿ, ನವಲಗುಂದ, ಕುಂದಗೋಳ ಪಟ್ಟಣಗಳಲ್ಲಿಯೂ ಆದಷ್ಟು ಶೀಘ್ರ ಕಾಮಗಾರಿಗಳನ್ನು ಪೂರ್ಣಗೊಳಿಸಿ, ಅಲ್ಲಿನ ಜನರಿಗೆ ದಿನದ 24 ಗಂಟೆ ನಿರಂತರ ಕುಡಿಯುವ ನೀರು ಲಭಿಸುವಂತೆ ಕ್ರಮವಹಿಸಲಾಗುವುದು ಎಂದು ಸಚಿವರು ತಿಳಿಸಿದರು.

*******

**ಈಗ ಪ್ರಕಟಣೆ ನಂತರ ಪ್ರದೇಶ ಸಮಾಚಾರ ಮುಂದುವರಿಯುವುದು..**

**ಪ್ರಕಟಣೆ–42 ಸೆಕೆಂಡ್ಸ್**

**ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ**

*******

**ವಿಜಯಪುರ ಜಿಲ್ಲೆಯಲ್ಲಿ** ಬಿಸಿಲಿನ ತಾಪ ಹೆಚ್ಚುತ್ತಿದ್ದು, ನಿಡಗುಂದಿ ತಾಲೂಕಿನ ಆಲಮಟ್ಟಿ ಕೃಷ್ಣಾ ಜಲಾಶಯದಲ್ಲಿ ನೀರಿನ ಮಟ್ಟ ಕುಸಿದಿದೆ. 519.60 ಮೀಟರ್ ಎತ್ತರದ ಜಲಾಶಯದಲ್ಲಿ 123.08 ಟಿಎಂಸಿ ನೀರನ್ನು ಸಂಗ್ರಹ ಮಾಡಬಹುದಾಗಿದೆ. ಆದರೆ ಸದ್ಯ 27.063 ಟಿಎಂಸಿ ಮಾತ್ರ ಸಂಗ್ರಹವಿದೆ. ಕಳೆದ ವರುಷಕ್ಕೆ ಹೋಲಿಸಿದರೆ ಈ ವರುಷ ನೀರಿನ ಮಟ್ಟ ಪರವಾಗಿಲ್ಲ, ಕುಡಿಯುವ ನೀರಿಗೆ ಯಾವುದೇ ತೊಂದರೆ ಇಲ್ಲ ಎಂದು ಕೃಷ್ಣಾ ಭಾಗ್ಯ ಜಲ ನಿಗಮದ ವ್ಯವಸ್ಥಾಪಕ ನಿರ್ದೇಶಕ ಕೃಷ್ಣಮೂರ್ತಿ ಕುಲಕರ್ಣಿ ಮಾಹಿತಿ ನೀಡಿದ್ದಾರೆ.

**ಧ್ವನಿ–ಕೃಷ್ಣಮೂರ್ತಿ ಕುಲಕರ್ಣಿ– 32 ಸೆಕೆಂಡ್ಸ್**

*******

**ಭೀಮಾ ಹಾಗೂ ಕೃಷ್ಣಾ** ನದಿಗಳ ನೀರಿನ ಬಳಕೆಗೆ ಸಂಬಂಧಿಸಿದಂತೆ ಇರುವ ಗೊಂದಲ ಬಗೆಹರಿಸಿ, ಶಾಶ್ವತ ಪರಿಹಾರ ಕಂಡುಕೊಳ್ಳುವ ನಿಟ್ಟಿನಲ್ಲಿ ವಿಜಯಪುರ, ಬೆಳಗಾವಿ ಹಾಗೂ ಕಲಬುರ್ಗಿ ಜಿಲ್ಲೆಯ ಶಾಸಕರನ್ನೊಳಗೊಂಡ ಉನ್ನತ ಮಟ್ಟದ ನಿಯೋಗ ಮಹಾರಾಷ್ಟ್ರ ಸರ್ಕಾರವನ್ನು ಭೇಟಿ ಮಾಡಲಿದೆ ಎಂದು ಇಂಡಿ ಶಾಸಕ ಯಶ್ವಂತರಾಯಗೌಡ ಪಾಟೀಲ್ ಹೇಳಿದ್ದಾರೆ. ವಿಜಯಪುರದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕೃಷ್ಣಾ ಮತ್ತು ಭೀಮಾ ನದಿಗಳಿಗೆ ಸಂಬಂಧಿಸಿದ ಕುಡಿಯುವ ನೀರಿನ ಯೋಜನೆಗಳನ್ನು ಶಾಶ್ವತವಾಗಿ ಅನುಷ್ಠಾನಗೊಳಿಸುವ ಅಗತ್ಯವಿದ್ದು, ಈ ಹಿನ್ನೆಲೆಯಲ್ಲಿ ಶಾಸಕರನ್ನೊಳಗೊಂಡ ನಿಯೋಗ ಮಹಾರಾಷ್ಟ್ರ ಸರ್ಕಾರವನ್ನು ಭೇಟಿ ಮಾಡಿ ಸಮಗ್ರ ಚರ್ಚೆ ನಡೆಸಲಿದೆ ಎಂದು ಅವರು ತಿಳಿಸಿದರು.

*******

**ಕಲಬುರಗಿ ಜಿಲ್ಲೆಯ** ಯಾವುದೇ ಗ್ರಾಮೀಣ ಮತ್ತು ನಗರ ಭಾಗದಲ್ಲಿ ಕುಡಿಯುವ ನೀರಿನ ಸಮಸ್ಯೆ ಕಂಡುಬಂದಲ್ಲಿ ಕೂಡಲೆ ಬಾಡಿಗೆ ಆಧಾರದ ಮೇಲೆ ಕೊಳವೆ ಬಾವಿ ಪಡೆದು ಜನವಸತಿ ಪ್ರದೇಶಗಳಿಗೆ ಕುಡಿಯುವ ನೀರು ಪೂರೈಕೆ ಮಾಡಬೇಕು ಎಂದು ಜಿಲ್ಲಾಧಿಕಾರಿ ಇಕ್ರಮ್ ಶರೀಫ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಕುಡಿಯುವ ನೀರಿನ ಸಮಸ್ಯೆ ಕಂಡುಬಂದಲ್ಲಿ ಕೂಡಲೆ ಜಿಲ್ಲಾ ಪಂಚಾಯತ್ ಸಿ.ಇ.ಓ ಮತ್ತು ಡಿ.ಯು.ಡಿ.ಸಿ ಅವರ ಗಮನಕ್ಕೆ ತರಬೇಕು. ಹಳೇ ಬೋರವೆಲ್‌ಗಳಿದ್ದಲ್ಲಿ ಅವುಗಳನ್ನು ಫ್ಲಶ್ ಮಾಡಬೇಕು. ಟ್ಯಾಂಕರ್ ಮೂಲಕ ನೀರು ಪೂರೈಕೆ ನಮ್ಮ ಕೊನೆ ಆದ್ಯತೆಯಾಗಿರಬೇಕು. ಎಂದು ಅವರು ಸೂಚಿಸಿದರು.

*******

**ಗದಗ ಜಿಲ್ಲೆಯ ರೋಣ** ತಾಲೂಕಿನ ಹಲವು ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಕಾಣಿಸಿಕೊಳ್ಳುತ್ತಿರುವುದರಿಂದ ಸಾರ್ವಜನಿಕರಿಗೆ ಯಾವುದೇ ರೀತಿಯ ತೊಂದರೆ ಉಂಟಾಗದಂತೆ ಮುನ್ನೆಚ್ಚರಿಕಾ ಕ್ರಮ ಕೈಗೊಳ್ಳಬೇಕು ಎಂದು ರೋಣ ತಾಲೂಕ ಪಂಚಾಯತಿ ಕಾರ್ಯ ನಿರ್ವಾಹಕ ಅಧಿಕಾರಿ ಚಂದ್ರಶೇಖರ ಕಂದಕೂರ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ತಾಲೂಕ ಪಂಚಾಯತಿ ಸಭಾಭವನದಲ್ಲಿ ಜರುಗಿದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಬೇಸಿಗೆ ಸಂದರ್ಭದಲ್ಲಿ ತಾಲೂಕಿನಲ್ಲಿ ಕುಡಿಯುವ ನೀರಿನ ಸಮಸ್ಯೆ ಕಂಡುಬಂದ ತಕ್ಷಣ ಪರ್ಯಾಯ ವ್ಯವಸ್ಥೆ ಕಲ್ಪಿಸಿ ಸಾರ್ವಜನಿಕರಿಗೆ ತೊಂದರೆ ಆಗದಂತೆ ನೋಡಿಕೊಳ್ಳಬೇಕು ಎಂದು ಸೂಚಿಸಿದರು.

*******

ಕೇಂದ್ರ ಸರ್ಕಾರದ 'ಜ್ಞಾನ ಭಾರತಂ ಮಿಷನ್' ಯೋಜನೆಯಡಿ ಯಾದಗಿರಿ ಜಿಲ್ಲೆಯಲ್ಲಿ ಹಸ್ತಪ್ರತಿಗಳ ಸಮಗ್ರ ಸಮೀಕ್ಷೆ ಮತ್ತು ಡಿಜಿಟಲೀಕರಣ ಕಾರ್ಯಕ್ಕೆ ಅಧಿಕೃತ ಚಾಲನೆ ನೀಡಲಾಗಿದೆ. ಈ ಕುರಿತು ಪ್ರಕಟಣೆ ನೀಡಿರುವ ಯಾದಗಿರಿ ಅಪರ ಜಿಲ್ಲಾಧಿಕಾರಿ ರಮೇಶ್ ಕೋಲಾರ, ಶತಮಾನಗಳಷ್ಟು ಹಳೆಯ ಕೈಬರಹದ ಗ್ರಂಥಗಳು, ಹಸ್ತಪ್ರತಿಗಳು, ಧಾರ್ಮಿಕ ಪತ್ರಗಳು ಹಾಗೂ ಐತಿಹಾಸಿಕ ದಾಖಲೆಗಳನ್ನು ಆಧುನಿಕ ತಂತ್ರಜ್ಞಾನ ಬಳಸಿ ಶಾಶ್ವತವಾಗಿ ಸಂರಕ್ಷಿಸುವ ಮಹತ್ವಾಕಾಂಕ್ಷಿ ಯೋಜನೆಯನ್ನು ಕೇಂದ್ರ ಸರ್ಕಾರ ಅನುಷ್ಠಾನಗೊಳಿಸುತ್ತಿದೆ ಎಂದಿದ್ದಾರೆ.

*******

**ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು**

ರಾಜ್ಯ ಸರ್ಕಾರದ ಬೃಹತ್ ಸಮಾವೇಶ ಸಾಧನೆಯ ಸಂಭ್ರಮವಲ್ಲ, ಸಾರ್ಥಕ ಸೇವೆಯ ಸಮರ್ಪಣೆ–ಕಂದಾಯ ಸಚಿವರ ಸ್ಪಷ್ಟನೆ.

ಒಳ ಮೀಸಲಾತಿ ಜಾರಿಗೆ ರಾಜ್ಯ ಕಾಂಗ್ರೆಸ್‌ಗೆ ಆಸಕ್ತಿ ಇಲ್ಲ–ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಆರೋಪ.

ಬೇಸಿಗೆ ಹಿನ್ನೆಲೆ, ರಾಜ್ಯದಲ್ಲಿ ಹೆಚ್ಚುತ್ತಿರುವ ಬಿಸಿಲಿನ ಧಗೆ: ಕುಡಿಯುವ ನೀರಿನ ಸಮಸ್ಯೆ ಪರಿಹಾರಕ್ಕೆ ಅಗತ್ಯ ಮುನ್ನೆಚ್ಚರಿಕಾ ಕ್ರಮ.

ಜ್ಞಾನ ಭಾರತಂ ಮಿಷನ್ ಯೋಜನೆಯಡಿ ಹಸ್ತಪ್ರತಿಗಳ ಸಂರಕ್ಷಣೆ, ಡಿಜಿಟಲೀಕರಣ: ಯಾದಗಿರಿ ಜಿಲ್ಲಾ ಮಟ್ಟದ ಸಮೀಕ್ಷೆಗೆ ಚಾಲನೆ.

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ ಈ ಬೆಳಿಗ್ಗೆ 7 ಗಂಟೆ 35 ನಿಮಿಷಕ್ಕೆ

****END****